ಮಣ್ಣುಗುಡ್ಡ ಗ್ರಾಮದಲ್ಲಿ ಮೂರು ಬಾಲಕರ ವಸತಿ ಗೃಹ ಕಟ್ಟಡಗಳನ್ನು ನಿರ್ಮಿಸಲಾಗಿದೆ. ಬಾಕಿ ಉಳಿದ ಕಟ್ಟಡಗಳು ನಿರ್ಮಾಣವಾಗಿರುವುದಿಲ್ಲ. ಪ್ರಾಂಶುಪಾಲರ ಹುದ್ದೆ ಖಾಲಿ ಇದ್ದು, ಪ್ರಭಾರದ ಮೇಲೆ ಹಿರಿಯ ಶಿಕ್ಷಕಿಯವರು ಪ್ರಾಂಶುಪಾಲರ ಹುದ್ದೆಯನ್ನು ನಿರ್ವಹಿಸುತ್ತಿದ್ದಾರೆ.

ಆ) ಅನುದಾನದ ಲಭ್ಯತೆಗನುಗುಣವಾಗಿ ಬಾಕಿ ಉಳಿದ ಕಟ್ಟಡಗಳ ಕಾಮಗಾರಿಗಳನ್ನು ಕೈಗೆತ್ತಿಗೊಳ್ಳಲಾಗುವುದು.

ನವೋದಯ/ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಜಿಲ್ಲಾ ಪಂಚಾಯಿತಿ ಅಧೀನದಲ್ಲಿ ನಿರ್ವಹಿಸಲ್ಪಡುತ್ತಿದ್ದು, ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಹೊರ ಸಂಪನ್ಮೂಲದಿಂದ ತಾತ್ಕಾಲಿಕವಾಗಿ ತುಂಬಿಕೊಳ್ಳಲು ಜಿಲ್ಲಾ ಪಂಚಾಯತಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ.

548 (883) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತೀರ್ಥಹಳ್ಳಿ ತಾಲ್ಲೂಕಿನಲ್ಲಿ ಪರಿಶಿಷ್ಟ ವರ್ಗದವರ ಸಂಖ್ಯೆ ಹೆಚ್ಚಾಗಿರುವುದರಿಂದ ಮತ್ತು ನಕ್ಷಲೀಯ ಚಟುವಟಿಕೆ ಇರುವ ಹಿನ್ನೆಲೆಯಲ್ಲಿ ತಾಲ್ಲೂಕಿಗೆ ಒಂದು ಪ್ರಿಮೆಟ್ರಿಕ್ ಬಾಲಕಿಯರ ಹಾಸ್ಟೆಲ್ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ;

ಆ) ಹೌದಾದಲ್ಲಿ ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) ತೀರ್ಥಹಳ್ಳಿ ತಾಲ್ಲೂಕಿನಲ್ಲಿ ಪರಿಶಿಷ್ಟ ವರ್ಗದ ಒಂದು ಪ್ರಿಮೆಟ್ರಿಕ್ ಬಾಲಕಿಯರ ವಿದ್ಯಾರ್ಥಿನಿಲಯ ಮಂಜೂರು ಮಾಡುವ ಕುರಿತು ಸಂಬಂಧಪಟ್ಟ ಜಿಲ್ಲೆಯ ಅಧಿಕಾರಿಯವರಿಂದ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ. ಪ್ರಸ್ತಾವನೆ ಬಂದಲ್ಲಿ ಮಂಜೂರು ಮಾಡುವ ಕುರಿತು ಪರಿಶೀಲಿಸಲಾಗುವುದು.

ಆ) ಉದ್ಭವಿಸುವುದಿಲ್ಲ.

549 (884) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೊರೆದ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು; (ವರ್ಷವಾರು, ಜಿಲ್ಲಾವಾರು, ಶಿವಮೊಗ್ಗ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು);

ಆ) ತೀರ್ಥಹಳ್ಳಿ ತಾಲ್ಲೂಕಿಗೆ ಮಂಜೂರು ಮಾಡಿದ ಬೋರ್‌ವೆಲ್‌ಗಳ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಸಾಲಿನಲ್ಲಾದರೂ ಹೆಚ್ಚಿನ ಸಂಖ್ಯೆಯಲ್ಲಿ ಬೋರ್‌ವೆಲ್‌ಗಳನ್ನು ಮಂಜೂರು ಮಾಡಲಾಗುವುದೇ?